# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 137(1149) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 07.03.2022 |
| ಉತ್ತರಿಸುವ ಸಚಿವರು | : | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯ ಫಾರ್ಮಸಿ ಪರಿಷತ್ತು ಯಾವಾಗ ಸ್ಥಾಪನೆ ಆಗಿದೆ(ಯೇ) | ಕರ್ನಾಟಕ ರಾಜ್ಯ ಫಾರ್ಮಸಿ ಪರಿಷತ್ತು 1968 ರಲ್ಲಿ ಸ್ಥಾಪನೆಯಾಗಿರುತ್ತದೆ. |
| ಆ) | ಕರ್ನಾಟಕ ರಾಜ್ಯ ಫಾರ್ಮಸಿ ಪರಿಷತ್ತಿನ ಚುನಾವಣೆಗಳು ನಡೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ. | ಬಂದಿದೆ. |
| ಇ) | ಬಂದಿದ್ದಲ್ಲಿ, ಚುನಾವಣೆ ನಡೆಯದಿರಲು ಕಾರಣವೇನು; (ವಿವರ ನೀಡುವುದು). | ಫಾರ್ಮಸಿ ಕಾಯ್ದೆ 1948 ರ ಕಲಂ 19 ರನ್ವಯ ಕರ್ನಾಟಕ ರಾಜ್ಯ ಫಾರ್ಮಸಿ ಪರಿಷತ್ತು 15 ಸದಸ್ಯರನ್ನು ಹೊಂದಿದ್ದು, ಅದರ ಪೈಕಿ 06 ಸದಸ್ಯರು ಚುನಾಯಿತ ಸದಸ್ಯರಾಗಿರುತ್ತಾರೆ. ಉಳಿದಂತೆ, ಸದಸ್ಯರು ನಾಮನಿರ್ದೇಶಿತ ಸದಸ್ಯರು ಮತ್ತು ಸರ್ಕಾರದ ಪ್ರತಿನಿಧಿಗಳಾಗಿರುತ್ತಾರೆ.<br><br>ಸದರಿ ಪರಿಷತ್ತಿಗೆ ಚುನಾವಣೆಯಲ್ಲಿ ಆಯ್ಕೆಯಾದ ಸದಸ್ಯರು ಮುಂದಿನ ಚುನಾಯಿತ ಪ್ರತಿನಿಧಿಗಳು ಆಯ್ಕೆಯಾಗುವವರೆಗೆ ಮುಂದುವರೆಯಲು ಫಾರ್ಮಸಿ ಕಾಯ್ದೆ 1948 ರ ಕಲಂ 25(1) ರನ್ವಯ ಅವಕಾಶವಿರುತ್ತದೆ.<br><br>ಕರ್ನಾಟಕ ರಾಜ್ಯ ಫಾರ್ಮಸಿ ಪರಿಷತ್ತಿಗೆ ಈ ಕೆಳಕಂಡ ಆಡಳಿತಾತ್ಮಕ ಕಾರಣಗಳಿಂದಾಗಿ ಚುನಾವಣೆ ನಡೆಸಲು ವಿಳಂಬವಾಗಿರುತ್ತದೆ:<br><br>➢ ಕರ್ನಾಟಕ ರಾಜ್ಯ ಫಾರ್ಮಸಿ ಪರಿಷತ್ತಿಗೆ ಚುನಾವಣೆ ನಡೆಸುವ ಸಲುವಾಗಿ ಕರ್ನಾಟಕ ಫಾರ್ಮಸಿ ಕೌನ್ಸಿಲ್ ನಿಯಮಗಳು 1968 ರ ನಿಯಮ 2 (ಜೆ) ರನ್ವಯ ಶ್ರೀ ಎಸ್. ರಂಗಪ್ಪ, ಕೆ.ಎ.ಎಸ್., ಮುಖ್ಯ ಆಡಳಿತಾಧಿಕಾರಿ, ಕರ್ನಾಟಕ ಆರೋಗ್ಯ ವ್ಯವಸ್ಥೆ ಅಭಿವೃದ್ಧಿ ಮತ್ತು ಸುಧಾರಣೆ ಯೋಜನೆ, ಬೆಂಗಳೂರು ಇವರನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಆಕುಕ 241 ಪಿಟಿಡಿ 2016, ದಿನಾಂಕ: 26.10.2016 ರನ್ವಯ ಚುನಾವಣಾ ಅಧಿಕಾರಿಯಾಗಿ ನೇಮಿಸಲಾಗಿತ್ತು. ಆದರೆ, |

| | | |
|---|---|---|
| | | ಕರ್ನಾಟಕ ಆರೋಗ್ಯ ವ್ಯವಸ್ಥೆ ಅಭಿವೃದ್ಧಿ ಮತ್ತು ಸುಧಾ ಯೋಜನೆಯನ್ನು ಮುಕ್ತಾಯಗೊಳಿಸಿದ್ದರಿಂದಾಗಿ ಸದರಿ ಅಧಿಕಾರಿಯು ಚುನಾವಣಾ ಕಾರ್ಯವನ್ನು ನಿರ್ವಹಿಸಿರುವುದಿಲ್ಲ.<br>➢ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ದಿನಾಂಕ: 15.04.2017 ರಂದು ನಡೆದ ಸಭೆಯಲ್ಲಿ ಕರ್ನಾಟಕ ರಾಜ್ಯ ಫಾರ್ಮಸಿ ಪರಿಷತ್ತಿನ ವತಿಯಿಂದ ಎಲ್ಲಾ ವರ್ಗಗಳ (ಆಜೀವ/ಖಾಯಂ) ಫಾರ್ಮಸಿಸ್ಟ್‌ಗಳಿಗೆ ನೀಡಲಾಗಿರುವ ನೋಂದಣಿ ಪ್ರಮಾಣ ಪತ್ರವನ್ನು ಫಾರ್ಮಸಿ ಕಾಯ್ದೆಯಡಿಯಲ್ಲಿ ನೀಡದೇ ಇರುವುದನ್ನು ಪರಿಶೀಲಿಸಿ, ಅವರುಗಳ ನೋಂದಣಿಯು ಊರ್ಜಿತವಾಗದೇ ಇರುವುದರಿಂದ, ಫಾರ್ಮಸಿ ಕಾಯ್ದೆ 1948ರ ಸೆಕ್ಷನ್ 34(1)(2)(3)ರ ಪ್ರಕಾರ ಪ್ರತಿ ವರ್ಷ ನಿಗದಿತ ಶುಲ್ಕವನ್ನು ಪಾವತಿಸಿ ಆನ್‌ಲೈನ್ ಮೂಲಕ ನವೀಕರಿಸಿಕೊಳ್ಳಲು ಸೂಚನೆ ನೀಡಲಾಗಿದೆ.<br>➢ ಅದರಂತೆ, ಆಜೀವ/ಖಾಯಂ ಸದಸ್ಯತ್ವದಿಂದ ವಾರ್ಷಿಕ ಸದಸ್ಯತ್ವದ ಮತದಾರರ ಪಟ್ಟಿಯನ್ನು ಕರ್ನಾಟಕ ರಾಜ್ಯ ಫಾರ್ಮಸಿ ಪರಿಷತ್ತು ತಯಾರಿಸಿ ಸಕಾಲದಲ್ಲಿ ಸಲ್ಲಿಸದೇ ಇರುವುದು ಚುನಾವಣಾ ವಿಳಂಬಕ್ಕೆ ಮುಖ್ಯ ಕಾರಣವಾಗಿರುತ್ತದೆ.<br>➢ ನಂತರ, ಶ್ರೀಮತಿ ಶ್ರೀರೂಪ ಕೆ.ಎ.ಎಸ್., ಮುಖ್ಯ ಆಡಳಿತಾಧಿಕಾರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ಇವರನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಆಕುಕ 124 ಐಎಂಎಂ 2016, ದಿನಾಂಕ: 23.05.2017 ರನ್ವಯ ಕರ್ನಾಟಕ ರಾಜ್ಯ ಫಾರ್ಮಸಿ ಪರಿಷತ್ತಿಗೆ ಚುನಾವಣೆ ನಡೆಸುವ ಸಲುವಾಗಿ ಚುನಾವಣಾಧಿಕಾರಿಯಾಗಿ ನೇಮಿಸಲಾಗಿತ್ತು. ಸದರಿಯವರಿಗೆ ಬೇರೆ ಇಲಾಖೆಗೆ ವರ್ಗಾವಣೆಯಾದ ಹಿನ್ನೆಲೆಯಲ್ಲಿ ಚುನಾವಣಾ ಅಧಿಕಾರಿ ಕರ್ತವ್ಯದಿಂದ ಬಿಡುಗಡೆಗೊಂಡಿದ್ದರಿಂದ ಚುನಾವಣಾ ಕರ್ತವ್ಯವನ್ನು ನಿರ್ವಹಿಸಿರುವುದಿಲ್ಲ.<br>➢ ತದನಂತರ, ಡಾ\|\| ಆಶಾ ಎಸ್., ಕೆ.ಎ.ಎಸ್, ಮುಖ್ಯ ಆಡಳಿತಾಧಿಕಾರಿ, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು ಇವರನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಆಕುಕ 204 ಪಿಟಿಡಿ 2014, ದಿನಾಂಕ: 19.06.2017 ರನ್ವಯ ಕರ್ನಾಟಕ ರಾಜ್ಯ ಫಾರ್ಮಸಿ ಪರಿಷತ್ತಿಗೆ ಚುನಾವಣೆ ನಡೆಸುವ ಸಲುವಾಗಿ ಚುನಾವಣಾಧಿಕಾರಿಯಾಗಿ ನೇಮಿಸಲಾಗಿತ್ತು. ಸದರಿಯವರು ಮಹಾಲಕ್ಷ್ಮೀ ಲೇಔಟ್, ವಿಧಾನ ಸಭಾ ಮತ ಕ್ಷೇತ್ರಕ್ಕೆ ಚುನಾವಣಾ ಅಧಿಕಾರಿಯಾಗಿ ನೇಮಕಗೊಂಡಿದ್ದರಿಂದ ಚುನಾವಣಾ ಕರ್ತವ್ಯವನ್ನು |

| | | |
|---|---|---|
| | | ನಿರ್ವಹಿಸಿರುವುದಿಲ್ಲ.<br>➢ ಇತ್ತೀಚೆಗೆ ರಾಜ್ಯದಲ್ಲಿ ಕೋವಿಡ್-19 ಮೊದಲನೆ ಅಲೆ, ಎರಡನೆ ಅಲೆ ಮತ್ತು ಮೂರನೆ ಅಲೆಯ ಕಾರಣಗಳಿಂದಲೂ ಸಹ ಚುನಾವಣೆ ಪ್ರಕ್ರಿಯೆ ವಿಳಂಬವಾಗಿರುತ್ತದೆ. |
| ಈ) | ಶೀಘ್ರವಾಗಿ ಚುನಾವಣೆ ನಡೆಸಲು ಸರ್ಕಾರ ಕೈಗೊಂಡ ಕ್ರಮಗಳೇನು? | ಕರ್ನಾಟಕ ರಾಜ್ಯ ಫಾರ್ಮಸಿ ಕೌನ್ಸಿಲ್ ನಿಯಮಗಳು 1968 ರ ನಿಯಮ 2 (ಜೆ) ಮತ್ತು ಭಾಗ-3 ರ ಫಾರ್ಮಸಿ ಕಾಯ್ದೆ 1948 ರನ್ವಯ ಕರ್ನಾಟಕ ರಾಜ್ಯ ಫಾರ್ಮಸಿ ಪರಿಷತ್ತಿನ ಚುನಾವಣೆ ನಡೆಸಲು ಚುನಾವಣಾ ಅಧಿಕಾರಿಯನ್ನು ನೇಮಿಸಿ ಆದೇಶ ಹೊರಡಿಸಲಾಗಿದೆ.<br>ಫಾರ್ಮಸಿ ಕೌನ್ಸಿಲ್ ಕಾಯ್ದೆ 1948 ರ ಕಲಂ 19 ರನ್ವಯ ಸರ್ಕಾರದಿಂದ ನಾಮನಿರ್ದೇಶಿಸಲ್ಪಡುವ 05 ಮಂದಿ ಸದಸ್ಯರನ್ನು ಹೊಸದಾಗಿ ನಾಮನಿರ್ದೇಶಿಸುವ ಪ್ರಕ್ರಿಯೆ ಸಹ ಸರ್ಕಾರದ ಪರಿಶೀಲನೆಯಲ್ಲಿದೆ. |

**ಸಂಖ್ಯೆ: ಆಕುಕ 35 ಐಎಂಎಂ 2022**

**(ಡಾ. ಕೆ.ಸುಧಾಕರ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು